# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರು ಇಲ್ಲಿ 2008-09- ಮತ್ತು 2009-10ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆ / ಯೋಜನೆಗಳಡಿ ಬಿಡುಗಡೆಯಾದ ಅನುದಾನವನ್ನು ದುರುಪಯೋಗಪಡಿಸಿಕೊಂಡ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್/ಉಪಲೋಕ್/ಜಿಎಲ್‌ಬಿ-23/2011/ಎಆರ್‌ಇ-6, ದಿನಾಂಕ: 01-12-2011.

-----

## ಪ್ರಸ್ತಾವನೆ

ಮೇಲೆ ಓದಲಾದ ದಿನಾಂಕ. 01-12-2011ರ ಅರೆ ಸರ್ಕಾರಿ ಪತ್ರದಲ್ಲಿ ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರು ಇಲ್ಲಿ 2008-09- ಮತ್ತು 2009-10ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆ / ಯೋಜನೆಗಳಡಿ ಬಿಡುಗಡೆಯಾದ ಅನುದಾನವನ್ನು ದುರುಪಯೋಗಪಡಿಸಿಕೊಂಡ ಅಧಿಕಾರಿ / ನೌಕರರ ವಿರುದ್ಧ ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರಡಿ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರಡಿ ಕಳುಹಿಸಿರುವ ತಮ್ಮ ವರದಿಯಲ್ಲಿ ಶ್ರೀ ಎ. ಆಂಜನೇಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಲಿಂಗಸುಗೂರು ಮತ್ತಿತರ ಅಧಿಕಾರಿ / ನೌಕರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರು ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2008-09 ಮತ್ತು 2009-10ನೇ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆ / ಯೋಜನೆಗಳಡಿ ಬಿಡುಗಡೆಯಾದ ಅನುದಾನವನ್ನು ಕಾಮಗಾರಿಗಳು ಪೂರ್ಣಗೊಳ್ಳದೇ ಇದ್ದರೂ ಸಹ ಅಪೂರ್ಣಗೊಂಡ ಕಾಮಗಾರಿಗಳಿಗೆ ಹಣ ಪಾವತಿಸಿ ಸರ್ಕಾರದ ಅನುದಾನವನ್ನು ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುವುದು ತನಿಖೆಯಲ್ಲಿ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಅವರುಗಳು ಎಸಗಿರುವ ಅಕ್ರಮಗಳು ಹಾಗೂ ಹಣ ದುರುಪಯೋಗ ಎಸಗಿರುವ ದುರ್ನಡತೆಗೆ ಸಂಬಂಧಿಸಿದಂತೆ ಅವರುಗಳ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರಡಿಯಲ್ಲಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತಕ್ಕೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

-----2

ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಅದಕ್ಕಾಗಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರಡಿಯಲ್ಲಿ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತಕ್ಕೆ ವಹಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಕೆಳಕಂಡ ಆದೇಶ:-

1. *ಶ್ರೀ ಎ. ಆಂಜನೇಯ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
2. *ಶ್ರೀ ಎಂ.ಎಸ್.ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
3. *ಶ್ರೀ ವೀರಭದ್ರಪ್ಪ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
4. *ಶ್ರೀ ಸೈಯದ್ ಅಬಿದ ಅಲಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*

**ಆದೇಶ ಸಂಖ್ಯೆ ಗ್ರಾಅಪ 47 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ. 03-01-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಈ ಕೆಳಕಂಡ ಅಧಿಕಾರಿ / ನೌಕರರ ಇವರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

1. *ಶ್ರೀ ಎ. ಆಂಜನೇಯ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
2. *ಶ್ರೀ ಎಂ.ಎಸ್.ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
3. *ಶ್ರೀ ವೀರಭದ್ರಪ್ಪ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*
4. *ಶ್ರೀ ಸೈಯದ್ ಅಬಿದ ಅಲಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.*

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಆರ್.ಶಿವಾನಂದಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಭಾರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

----3

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಉಪ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-6 ,ಕರ್ನಾಟಕ ಉಪ ಲೋಕಾಯುಕ್ತ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
10. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
11. ಸಂಬಂಧಪಟ್ಟ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ.
12. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ :